# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

"ವಿಟಿಯು ಅಧಿನಿಯಮ ೧೯೯೪" ರ ಅಡಿಯಲ್ಲಿಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ"

# Visvesvaraya Technological University

(State University of Government of Karnataka Established as per the VTU Act, 1994)

"Jnana Sangama" Belagavi-590018, Karnataka, India

## National Service Scheme

ಪ್ರೊ. ಬಿ.ಈ. ರಂಗಸ್ವಾಮಿ ಪಿಹೆಚ್.ಡಿ. | ದೂರವಾಣಿ ಸಂ : 0831-2405468

ಕುಲಸಚಿವರು | ಫ್ಯಾಕ್ಸ ಸಂ : 0831-2405467


ಸಂ. ವಿತಾವಿ/ಬಿಜಿಎಮ್/ರಾ.ಸೇ.ಯೋ./18/2024-25/1731 ದಿನಾಂಕ: 18 JUL 2025

**: ಸುತ್ತೋಲೆ :**

ವಿಷಯ : ಕನ್ನಡ ಮತ್ತು ಇಂಗ್ಲೀಷ ಭಾಷೆಗಳಲ್ಲಿ ಸಂವಿಧಾನ ಪೀಠಿಕೆ ಓದುವುದು ಮತ್ತು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಪ್ರದರ್ಶಿಸುವ ಕುರಿತು.

ಉಲ್ಲೇಖ : ಇಡಿ/211/ಯುಎನ್ಇ/2025 ದಿನಾಂಕ : 27.06.2025

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪ್ರಾರ್ಥನಾ ಸಮಯದಲ್ಲಿ ಸಂವಿಧಾನ ಪೀಠಿಕೆಯನ್ನು ಒದುವುದು ಹಾಗೂ ಎಲ್ಲರೂ ಸಂವಿಧಾನ ಪೀಠಿಕೆಗೆ ಬದ್ಧರಾಗುವುದು, ಸಂವಿಧಾನ ತತ್ವಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರತಿಜ್ಞೆಗೈಯುವುದು ಮತ್ತು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವಂತೆ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ. ಆದೇಶದ ಪ್ರತಿ ಲಗತ್ತಿಸಲಾಗಿದೆ.

ಮುಂದುವರೆದು, ಸದರಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಆಧೀನಕ್ಕೊಳಪಡುವ ಎಲ್ಲಾ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯಗಳು ಸಂವಿಧಾನ ಪೀಠಿಕೆ ಓದುವುದು ಹಾಗೂ ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಅನುಬಂಧದಲ್ಲಿ ನಮೂದಿಸಿರುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸುವಂತೆ ಈ ಮೂಲಕ ಆದೇಶಿಸಲಾಗಿದೆ.

18/07/25

ಕುಲಸಚಿವರು

ಇವರಿಗೆ,

ಪ್ರಾಂಶುಪಾಲರು,

ವಿ.ತಾ.ವಿ ಅಧೀನಕ್ಕೊಳಪಡುವ ಸಂಬಂಧಪಟ್ಟ

ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು

ಪ್ರತಿ ಮಾಹಿತಿಗಾಗಿ :

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ಮಾನ್ಯ ಕುಲಸಚಿವರು, ಆಡಳಿತ ವಿಭಾಗ, ವಿತಾವಿ ಬೆಳಗಾವಿ.
3. ರಾಜ್ಯ ಎನ್.ಎಸ್.ಎಸ್. ಅಧಿಕಾರಿಗಳು ರಾ.ಸೇ.ಯೋ. ಕೋಶ, ಯುಸೇಇ, ಬೆಂಗಳೂರು.
4. ಪ್ರಾದೇಶಿಕ ನಿರ್ದೇಶಕರು, ಬೆಳಗಾವಿ, ಮೈಸೂರು, ಮುದ್ದೇನಹಳ್ಳಿ, ಕಲಬುರ್ಗಿ
5. ವಿಶೇಷಾಧಿಕಾರಿಗಳು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್ ಸೈಟನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
6. ಕಛೇರಿ ಪ್ರತಿ.

1574

# ಭಾರತದ ಸಂವಿಧಾನ

## ಪೀಠಿಕೆ

ಭಾರತದ ಪ್ರಜೆಗಳಾದ ನಾವು.
ಭಾರತವನ್ನು ಸಾರ್ವಭೌಮ. ಸಮಾಜವಾದಿ. ಜಾತ್ಯತೀತ
ಪ್ರಜಾಸತ್ತಾತ್ಮಕ ಗಣರಾಜ್ಯವನ್ನಾಗಿ
ರೂಪಿಸುವುದಕ್ಕಾಗಿ;
ಭಾರತದ ಎಲ್ಲಾ ಪ್ರಜೆಗಳಿಗೆ
ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು;
ವಿಚಾರ, ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು
ಉಪಾಸನೆಯ ಸ್ವಾತಂತ್ರ್ಯವನ್ನು;
ಸ್ಥಾನಮಾನ ಮತ್ತು ಅವಕಾಶಗಳ ಸಮತೆಯನ್ನು
ದೊರೆಯುವಂತೆ ಮಾಡುವುದಕ್ಕಾಗಿ;
ವ್ಯಕ್ತಿಗೌರವ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲಿ
ಭ್ರಾತೃತ್ವ ಭಾವನೆಯನ್ನು ಮೂಡಿಸುವುದಕ್ಕೆ
ದೃಢಸಂಕಲ್ಪ ಮಾಡಿ.
ನಮ್ಮ ಸಂವಿಧಾನ ಸಭೆಯಲ್ಲಿ
1949ನೆಯ ಇಸವಿಯ ನವೆಂಬರ್ ತಿಂಗಳ 26ನೇ ದಿನದಂದು
ಈ ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು.
ಅಂಗೀಕರಿಸಿ. ಶಾಸನವಾಗಿ ವಿಧಿಸಿಕೊಂಡಿದ್ದೇವೆ.



# The Constitution of India

## PREAMBLE

WE, THE PEOPLE OF INDIA,
having solemnly resolved to constitute India into a
SOVEREIGN SOCIALIST
SECULAR DEMOCRATIC REPUBLIC
and to secure to all its citizens:

©peacockride

JUSTICE, social, economic and political;
LIBERTY of thought,
expression, belief, faith and worship;

EQUALITY of status and of opportunity;
and to promote among them all
FRATERNITY assuring the dignity of the
individual and the unity and
integrity of the Nation;

IN OUR CONSTITUENT ASSEMBLY
this twenty-sixth day of November, 1949, do
HEREBY ADOPT, ENACT AND GIVE TO
OURSELVES THIS CONSTITUTION.